ಎಂ ವಿ ಸಿ ನಂ. 164/2020

ಪಿ ಡಬ್ಲ್ಯೂ: 2

ದಿನಾಂಕ 26/12/2025 ರಂದು ಪ್ರಮಾಣ ವಚನ ಬೋಧಿಸಲಾಯಿತು.

ಪಾಟೀ ಸವಾಲು: 3 ನೇ ಎದುರುದಾರರ ಪರ: ಶ್ರೀ ಸಿ ಜೆ ಎಂ ವಕೀಲರಿಂದ:

ನಿಂಗಮ್ಮರವರಿಗೆ ಸುಮಾರು 70-75 ವರ್ಷ ವಯಸ್ಸಾಗಿತ್ತು ಎಂದರೆ ಸಾಕ್ಷಿ 65 ವರ್ಷ ವಯಸ್ಸಾಗಿತ್ತು ಎಂದು ನುಡಿಯುತ್ತಾರೆ. ನಿಪಿ-31 ರಲ್ಲಿ ನಮೂದಿಸಿರುವ ಜನ್ಮದಿನಾಂಕದ ಮಾಹಿತಿಯನ್ನು ನಾವೇ ನೀಡಿರುತ್ತೇವೆ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ, ನನ್ನ ತಾಯಿ ನೀಡಿರುತ್ತಾರೆ ಎಂದು ನುಡಿಯುತ್ತಾರೆ. ನಿಪಿ-31 ರ ದಾಖಲೆಯನ್ನು ಹೊರತು ಪಡಿಸಿ ನನ್ನ ತಾಯಿಯ ಜನ್ಮ ದಿನಾಂಕವನ್ನು ತೋರಿಸಲು ಇತರೇ ದಾಖಲೆಗಳು ನನ್ನ ಬಳಿ ಇರುವುದಿಲ್ಲ. ನನ್ನ ತಾಯಿ ಮನೆಯಲ್ಲಿಯೇ ಮೃತ ಪಟ್ಟಿರುತ್ತಾರೆ ಎಂದರೆ ಸಾಕ್ಷಿ ಶಿವಮೊಗ್ಗದ ಬಸವೇಶ್ವರ ಆಸ್ಪತ್ರೆಯಲ್ಲಿ ಮೃತ ಪಟ್ಟಿರುತ್ತಾರೆ ಎಂದು ನುಡಿಯುತ್ತಾರೆ. ಸದರಿ ಆಸ್ಪತ್ರೆಯಲ್ಲಿ ನನ್ನ ತಾಯಿ ಮೃತ ಪಟ್ಟಿರುತ್ತಾರೆಂದು ತೋರಿಸಲು ಯಾವುದೇ ದಾಖಲೆ ಇಲ್ಲ ಎಂದರೆ ಸಾಕ್ಷಿ ಹಾಜರುಪಡಿಸಿದ್ದೇನೆ ಎಂದು ನುಡಿಯುತ್ತಾರೆ. ನಿಪಿ-32 ರ ಮರಣ ಪ್ರಮಾಣ ಪತ್ರದಲ್ಲಿ ನನ್ನ ತಾಯಿ ಅಪಘಾತದಿಂದ ಮೃತ ಪಟ್ಟಿರುತ್ತಾರೆಂದು ನಮೂದಾಗಿರುವುದಿಲ್ಲ ಹಾಗೂ ಆ ರೀತಿ ಮೃತ ಪಟ್ಟಿರುವ ಬಗ್ಗೆ ನನ್ನ ಬಳಿ ಯಾವುದೇ ದಾಖಲೆಗಳು ಇರುವುದಿಲ್ಲ ಎಂದರೆ ಸಾಕ್ಷಿ ಅವರು ಅಪಘಾತದಿಂದಲೇ ಮೃತ ಪಟ್ಟಿರುತ್ತಾರೆ ಎಂದು ನುಡಿಯುತ್ತಾರೆ. ನಿಪಿ-32 ರ ದಾಖಲೆಯನ್ನು ಈ ಕೇಸಿಗಾಗಿ ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ನನ್ನ ತಾಯಿ ಅಪಘಾತದಿಂದಾದ

ಗಾಯಗಳಿಂದಲೇ ಮೃತ ಪಟ್ಟಿರುತ್ತಾರೆಂದು ನಾನು ಸಲ್ಲಿಸಿದ ಅರ್ಜಿಯಲ್ಲಿ ಮೊದಲು ಹೇಳಿರಲಿಲ್ಲ ಎಂದರೆ ಸಾಕ್ಷಿ ಹೇಳಿರುತ್ತೇನೆ ಎಂದು ನುಡಿಯುತ್ತಾರೆ. ನನ್ನ ತಾಯಿ ಸುಮಾರು ಎಷ್ಟು ದಿನಗಳ ಕಾಲ ಬಸವೇಶ್ವರ ಆಸ್ಪತ್ರೆಯಲ್ಲಿ ಒಳರೋಗಿಯಾಗಿ ಚಿಕಿತ್ಸೆ ಪಡೆದಿದ್ದರು ಎಂದರೆ ಸಾಕ್ಷಿ ಮೃತ ಪಡುವ 10-15 ದಿನಗಳ ಹಿಂದಿನಿಂದ ಎಂದು ನುಡಿಯುತ್ತಾರೆ. ಆ ರೀತಿ ನನ್ನ ತಾಯಿ 10-15 ದಿನಗಳ ಕಾಲ ಒಳರೋಗಿಯಾಗಿ ಚಿಕಿತ್ಸೆ ಪಡೆದ ಬಗ್ಗೆ ನನ್ನ ಬಳಿ ಯಾವುದೇ ದಾಖಲೆ ಇಲ್ಲ ಎಂದರೆ ಸಾಕ್ಷಿ ಆ ದಾಖಲೆಯನ್ನು ನಾನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ ಎಂದು ನುಡಿಯುತ್ತಾರೆ. ಹೆಚ್ಚಿನ ಪರಿಹಾರ ಪಡೆಯುವ ಉದ್ದೇಶದಿಂದ ನಿಪಿ-32 ರ ಮರಣ ಪ್ರಮಾಣ ಪತ್ರವನ್ನು ನನ್ನ ತಾಯಿ ಬಸವೇಶ್ವರ ಆಸ್ಪತ್ರೆಯಲ್ಲಿ ಮರಣ ಹೊಂದಿರುತ್ತಾರೆ ಎಂಬ ವಿಚಾರವನ್ನು ಸೃಷ್ಟಿಸಿರುತ್ತೇನೆ ಎಂದು ನುಡಿಯುತ್ತಾರೆ. ನನಗೆ ತಾಯಿಗೆ 70-75 ವರ್ಷ ವಯಸ್ಸಾಗಿದ್ದರಿಂದ ಹೆಚ್ಚಿನ ಪರಿಹಾರ ಪಡೆಯುವ ಸಲುವಾಗಿ ಅವರ ವಯಸ್ಸನ್ನು ಕಡಿಮೆ ತೋರಿಸಿ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ತಾಯಿ ಮನೆಯಲ್ಲೇ ಸ್ವಾಭಾವಿಕ ವಯೋಸಹಜವಾಗಿ ಮೃತ ಪಟ್ಟಿರುತ್ತಾರೆ ಹೊರತು ಅಪಘಾತದಿಂದಲ್ಲ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

ಓ ಹೇ ಕೇ ಸ ಇ ಎ ಒ

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ ಎಂ ಎಫ್ ಸಿ, ಕಡೂರು.